**ಕರ್ನಾಟಕ ಸರ್ಕಾರ**

**1ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ತರೀಕೆರೆ.**

**ಸಿ.ಸಿ.ನಂ.1156/2022**

ಪಿ.ಡಬ್ಲ್ಯೂ: 1

ಸಿ.ಡಬ್ಲ್ಯೂ: 1

ಸಾಕ್ಷಿದಾರರ **ಹೆಸರು** : ಗಾಯಿತ್ರಿ

ಗಂಡನ **ಹೆಸರು** : ಅಶ್ವಥ್

**ವಯಸ್ಸು** : **65 ವರ್ಷ**

**ಉದ್ಯೋಗ** : ಗೃಹಿಣಿ

**ವಾಸಸ್ಥಳ** : ಲಕ್ಕವಳ್ಳಿ ಗ್ರಾಮ

**ದಿನಾಂಕ: 15-06-2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು**

**ಮುಖ್ಯ ವಿಚಾರಣೆ :** ಸಹಾಯಕ ಸರ್ಕಾರಿ ಅಭಿಯೋಜಕರವರಿಂದ

ಚಾಸಾ-6 ನನ್ನ ಗಂಡ . ಚಾಸಾ-7 ನನ್ನ ಮಗಳು. ಆರೋಪಿತರು ನಮ್ಮ ಮನೆಗೆ ಅತೀಕ್ರಮ ಪ್ರವೇಶ ಮಾಡಿರುವುದಿಲ್ಲ. 1 ಮತ್ತು 2ನೇ ಆರೋಪಿತರು ನನ್ನ ಗಂಡನಿಗೆ ಯಾವುದೇ ಅವಾಚ್ಯ ಶಬ್ದಗಳಿಂದ ಬೈದಿರುವುದಿಲ್ಲ. 1 ಮತ್ತು 2ನೇ ಆರೋಪಿತರು ನನ್ನ ಗಂಡನಿಗೆ ಹಲ್ಲೆ ಮಾಡಿರುವುದಿಲ್ಲ. 2ನೇ ಆರೋಪಿಯು ನನ್ನ ಮೇಲೆ ಹಲ್ಲೆ ಮಾಡಿರುವುದಿಲ್ಲ. ಆರೋಪಿತರು ನನಗೂ ಹಾಗೂ ನನ್ನ ಗಂಡನಿಗೂ ಕೊಲೆ ಬೆದರಿಕೆ ಹಾಕಿರುವುದಿಲ್ಲ. ಆರೋಪಿಗಳಿಂದ ನನಗೆ ಯಾವುದೇ ರೀತಿಯ ತೊಂದರೆಯಾಗಿರುವುದಿಲ್ಲ. ನಾನು ಈ ಪ್ರಕರಣದ ಸಂಬಂಧ ಆಸ್ಪತ್ರೆಯಲ್ಲಿ ಚಿಕಿತ್ಸೆಯನ್ನು ಪಡೆದುಕೊಂಡಿರುವುದಿಲ್ಲ. ಈ ಪ್ರಕರಣದ ಸಂಬಂಧ ಬೇರೆ ಏನೂ ಗೊತ್ತಿರುವುದಿಲ್ಲ.

ಸಾಕ್ಷಿಗೆ ಒಂದು ದಾಖಲಾತಿಯನ್ನು ತೋರಿಸಲಾಗಿದ್ದು, ಅದು ದೂರು ಆಗಿದ್ದು, ಸದರಿ ದಾಖಲಾತಿಯನ್ನು ನಿಪಿ-1 ಎಂದು, ಸಾಕ್ಷಿಯ ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು.

ಸಾಕ್ಷಿಗೆ ಮತ್ತೊಂದು ದಾಖಲಾತಿಯನ್ನು ತೋರಿಸಲಾಗಿದ್ದು, ಅದು ಸ್ಥಳ ಮಹಜರ್ ಆಗಿದ್ದು, ಸದರಿ ದಾಖಲಾತಿಯನ್ನು ನಿಪಿ-2 ಎಂದು, ಸಾಕ್ಷಿಯ ಸಹಿಯನ್ನು ನಿಪಿ-2(ಎ) ಎಂದು ಗುರುತಿಸಲಾಯಿತು.

ಸಾಕ್ಷಿಗೆ ಎರಡು ಛಾಯಚಿತ್ರಗಳನ್ನು ತೋರಿಸಲಾಗಿದ್ದು, ಅವುಗಳಲಿಲ ತಮ್ಮ ಇರುವಿಕೆಯನ್ನು ನೋಡಿ ಗುರುತಿಸಿದ್ದು, ಅವುಗಳನ್ನು ನಿಪಿ-3 ಮತ್ತು 4 ಎಂದು ಗುರುತಿಸಲಾಯಿತು.

ಸಾಕ್ಷಿಗೆ ಮತ್ತೊಂದು ದಾಖಲಾತಿಯನ್ನು ತೋರಿಸಲಾಗಿದ್ದು, ಅದು ಅಮಾನತ್ತು ಮಹಜರ್ ಆಗಿದ್ದು, ಸದರಿ ದಾಖಲಾತಿಯನ್ನು ನಿಪಿ-5 ಎಂದು, ಸಾಕ್ಷಿಯ ಸಹಿಯನ್ನು ನಿಪಿ-5(ಎ) ಎಂದು ಗುರುತಿಸಲಾಯಿತು.

( ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.)

**ಪಾಟೀ ಸವಾಲುಃ** ಸಹಾಯಕ ಸರ್ಕಾರಿ ಅಭಿಯೋಜಕರವರಿಂದ

ದಿನಾಂಕಃ **16-07-2020** ರಿಂದ **31-07-2020** ರ ಮಧ್ಯದ ಅವಧಿಯಲ್ಲಿ ಪ್ರಾಕ್ಷಿಕ ಸತ್ಯಪ್ರಭಾ ಕನ್ನಡ ಪತ್ರಿಕೆಯಲ್ಲಿ ಅರಣ್ಯ ಅಭಿವೃದ್ದಿ ಹೆಸರಿನಲ್ಲಿ ಸರ್ಕಾರದ ಹಣ ಲೂಟಿ, ಅಧಿಕಾರಿ ವಿರುದ್ದ ಕ್ರಮ ಏಕಿಲ್ಲ? ಎಂಬ ಶೀರ್ಷಿಕೆಯಲ್ಲಿ ನನ್ನ ಗಂಡನಾದ ಚಾಸಾ-6 ರವರು ವರದಿ ಮಾಡಿದ್ದು, ದಿಃ **20-08-2020** ರಂದು ಸಂಜೆ **6-00** ಗಂಟೆ ಸಮಯದಲ್ಲಿ ಲಕ್ಕವಳ್ಳಿಯ ನಮ್ಮ ಮನೆಯ ಹತ್ತಿರ ಆರೋಪಿತರು ಅಕ್ರಮ ಕೂಟ ಕಟ್ಟಿಕೊಂಡು ಅತೀಕ್ರಮ ಪ್ರವೇಶ ಮಾಡಿರುತ್ತಾರೆಂದರೆ ಸರಿಯಲ್ಲ. **1** ಮತ್ತು **2** ನೇ ಆರೋಪಿತರು ಚಾಸಾ-6 ರವರಿಗೆ ಅವಾಚ್ಯ ಶಬ್ದಗಳಿಂದ ಬೈದು ಅವರ ಕೆನ್ನೆಗೆ ಕೈಯಿಂದ ಹೊಡೆದು ಹಲ್ಲೆ ಮಾಡಿರುತ್ತಾರೆಂದರೆ ಸರಿಯಲ್ಲ. **2** ನೇ ಆರೋಪಿಯು ಚಾಸಾ-6 ರವರನ್ನು ಕೈಗಳಿಂದ ಕೈಕಾಲುಗಳಿಗೆ ಹೊಡೆದು ಸಾಮಾನ್ಯ ಸ್ವರೂಪದ ಗಾಯ ಮಾಡಿರುತ್ತಾರೆಂದರೆ ಸರಿಯಲ್ಲ. **2** ನೇ ಆರೋಪಿಯು ಜಗಳ ಬಿಡಿಸಲು ಬಂದ ನನ್ನ ತಲೆ ಕೂದಲು ಹಿಡಿದು ಎಳೆದಾಡಿ, ಕೆಳಗೆ ಬೀಳಿಸಿ ಅವಮಾನ ಮಾಡಿರುತ್ತಾರೆಂದರೆ ಸರಿಯಲ್ಲ. ನನಗೆ ಮತ್ತು ಚಾಸಾ-6 ರವರಿಗೆ ಆರೋಪಿತರು ಕೊಲೆ ಬೆದರಿಕೆ ಹಾಕಿರುತ್ತಾರೆಂದರೆ ಸರಿಯಲ್ಲ. ಸದರಿ ವಿಚಾರವಾಗಿ ನಾನು ದಿಃ **21-08-2020** ರಂದು ಆರೋಪಿತರ ವಿರುದ್ದ ಲಕ್ಕವಳ್ಳಿ ಪೊಲೀಸ್ ಠಾಣೆಯಲ್ಲಿ ದೂರು ನೀಡಿರುತ್ತೇನೆಂದರೆ ಸರಿ. ಆದರೆ ಅದರಲ್ಲಿ ಬರೆದಿರುವ ವಿಚಾರ ನನಗೆ ಗೊತ್ತಿಲ್ಲ. ಅದೇ ದಿನ ಪೊಲೀಸರು ಸ್ಥಳಕ್ಕೆ ಬಂದು ಮಹಜರ್ ಕ್ರಮ ಜರುಗಿಸಿರುತ್ತಾರೆಂದರೆ ಸಾಕ್ಷಿ ಅದರಲ್ಲಿ ಬರೆದಿರುವ ವಿಚಾರ ನನಗೆ ಗೊತ್ತಿಲ್ಲ ಎಂದು ನುಡಿದಿರುತ್ತಾರೆ. ದಿನಾಂಕಃ **21-08-2020** ರಂದು ಲಕ್ಕವಳ್ಳಿ ಪೊಲೀಸ್ ಠಾಣಾ ಆವರಣದಲ್ಲಿ ವಾಹನ ಅಮಾನತ್ತು ಮಹಜರ್ ಕ್ರಮವನ್ನು ಜರುಗಿಸಿದ್ದು, ಅದಕ್ಕೆ ನೀವು ಸಹಿ

ಮಾಡಿರುತ್ತೀರಾ ಎಂದರೆ ಸಾಕ್ಷಿ ಅದರಲ್ಲಿ ಬರೆದಿರುವ ವಿಚಾರ ನನಗೆ ಗೊತ್ತಿಲ್ಲ ಎಂದು ನುಡಿದಿರುತ್ತಾರೆ,

ದಿಃ **05-10-2020** ರಂದು ಘಟನೆಯ ಸಂಬಂಧ ನ್ಯಾಯಾಲಯದಲ್ಲಿ ನ್ಯಾಯಾಧೀಶರ ಮುಂದೆ ಕಲಂ **164** ಸಿ ಆರ್ ಪಿ ಸಿ ಅಡಿಯಲ್ಲಿ ಹೇಳಿಕೆಯನ್ನು ನೀಡಿದ್ದು, ಅದರಲ್ಲಿ ಹೇಳಿರುವ ವಿಚಾರ ಈಗ ನನಗೆ ನೆನಪಿಲ್ಲ. ಸದರಿ ಹೇಳಿಕೆಯನ್ನು ನಿಪಿ-**6** ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ-**6**(ಎ) ಎಂದು ಗುರುತಿಸಲಾಯಿತು.

ನಾವು ಮತ್ತು ಆರೋಪಿತರು ಈ ಪ್ರಕರಣವನ್ನು ರಾಜಿ ಮಾಡಿಕೊಂಡಿದ್ದೇವೆ ಎಂದರೆ ಸರಿ. ನಾವು ಮತ್ತು ಆರೋಪಿತರು ಈ ಪ್ರಕರಣವನ್ನು ರಾಜಿ ಮಾಡಿಕೊಂಡ ಕಾರಣ ಆರೋಪಿಗಳಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ಪಾಟೀ ಸವಾಲು ಃ ಆರೋಪಿ ಪರ ವಕೀಲರಿಂದ.**

ಪಾಟೀ ಸವಾಲು ಇರುವುದಿಲ್ಲ

**ಮರುವಿಚಾರಣೆಃ** ಇರುವುದಿಲ್ಲ.

**(ತೆರೆದ ನ್ಯಾಯಾಲಯದಲ್ಲಿ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)**

ಓ. ಕೇ. ಸ. ಇ. ಎ. ಒ.

ಸಹಿ/-

1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
**ಪ್ರ.ದ.ನ್ಯಾ.ದಂ.ರವರು,ತರೀಕೆರೆ.**

ನಾನು ಈಗ ಓದಿ ಹೇಳಿದಂತೆ ದಿನಾಂಕ: **03-06-2021** - - - - ರಂದು ಪುನಃ ನೋಡಿದರೆ ಗುರುತಿಸುತ್ತೇನೆಂದು ಪೊಲೀಸರ ಮುಂದೆ ಹೇಳಿಕೆಯನ್ನು ನೀಡಿರುತ್ತೇನೆಂದರೆ ಸರಿಯಲ್ಲ. ಸಾಕ್ಷಿಯ ಅಲ್ಲಗೆಳೆದ ಹೇಳಿಕೆ ಭಾಗವನ್ನು ನಿಪಿ-4 ಎಂದು ಗುರುತಿಸಲಾಯಿತು.